ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ನಾಗಮಂಗಲ ತಾ: ಹರಪನಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಖಾಲಿ ಇರುವ ಗಣಿತ ಶಿಕ್ಷಕರ ಹುದ್ದೆಗೆ ಬೇರೆ ಶಾಲೆಯಿಂದ ಈಗಾಗಲೇ ತಾತ್ಕಾಲಿಕವಾಗಿ ಶಿಕ್ಷಕರನ್ನು ನಿಯೋಜನೆ ಮಾಡಲಾಗಿದೆ. ಸದ್ಯದಲ್ಲಿ ಖಾಲಿ ಹುದ್ದೆಯನ್ನು ನೇರ ನೇಮಕಾತಿ ಮೂಲಕ ಅಥವಾ ವರ್ಗಾವಣೆಯಿಂದ ಭರ್ತಿ ಮಾಡಲಾಗುವುದು.

2. ಹಿರಿಯ ಪ್ರಾಥಮಿಕ ಶಾಲೆಯಲ್ಲಿ 62 ವಿದ್ಯಾರ್ಥಿಗಳಿದ್ದು 3 ಜನ ಶಿಕ್ಷಕರಿರುತ್ತಾರೆ. ಹಾಗೂ ಒಂದು ಹುದ್ದೆ ಖಾಲಿ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರು ಇರುತ್ತಾರೆ.

ಆ) ಹರಪನಹಳ್ಳಿ ಗ್ರಾಮದ ಪ್ರೌಢಶಾಲೆಯನ್ನು ನಿರ್ಮಿಸಲು ಗ್ರಾಮಸ್ಥರು 6 ಎಕರೆ ಜಮೀನನ್ನು ಸರ್ಕಾರಕ್ಕೆ ದಾನವಾಗಿ ನೀಡಿದ್ದು ಈ ಸ್ಥಳದಲ್ಲಿ ಈಗಾಗಲೆ ಸುಸಜ್ಜಿತವಾದ 8 ಕೊಠಡಿಗಳುಳ್ಳ ಕಟ್ಟಡ ನಿರ್ಮಿಸಿದ್ದು ದಿನಾಂಕ: 11-03-2001ರಿಂದ ಶಾಲೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ.

ಇ) ಅಂತಹ ಯಾವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

ಶಿವಮೊಗ್ಗ ನಗರಕ್ಕೆ ಸರ್ಕಾರಿ ಅಥವಾ ಖಾಸಗಿ ವೈದ್ಯಕೀಯ ಕಾಲೇಜು

944 (1417) ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರಕ್ಕೆ ಹೊಸದಾಗಿ ಸರ್ಕಾರಿ ಅಥವಾ ಖಾಸಗಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಖಾಸಗಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಅನುಮತಿ ಕೋರಿ ಸರ್ಕಾರಕ್ಕೆ ಎಷ್ಟು ಅನುಮತಿಗಳು ಬಂದಿರುತ್ತವೆ (ವಿವರ ನೀಡುವುದು)?

ಡಾ॥ ಎ.ಬಿ. ಮಾಲಕ ರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಕರ್ನಾಟಕ ಉಚ್ಚ ನ್ಯಾಯಾಲಯದ ನಿರ್ದೇಶನುಸಾರ ಶರಾವತಿ ಶಿಕ್ಷಣ ಸಂಘದ ಅರ್ಜಿಯು ಪುನರ್ ಪರಿಶೀಲನೆಯಲ್ಲಿದೆ.

ಆ) ಯಾವುದು ಇಲ್ಲ (2002-2003ನೇ ಸಾಲಿನಲ್ಲಿ)

ರಾಜ್ಯದ ಪ್ರಮುಖ ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಸೌಲಭ್ಯ

952 (1170) ಶ್ರೀ ದಿನೇಶ್ ಗುಂಡುರಾವ್ (ಗಾಂಧಿನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರಮುಖ ಪಟ್ಟಣಗಳಲ್ಲಿ ಸಾಕಷ್ಟು ಸ್ಥಳಾವಕಾಶವಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾಮಾನ್ಯ ಜನತೆಗಾಗಿ ಸೂಪರ್ ಸ್ಪೆಷಾಲಿಟಿ ಚಿಕಿತ್ಸಾ ಸೌಲಭ್ಯದ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಹೃದಯ, ಕಿಡ್ನಿ ಇತ್ಯಾದಿ ಪ್ರಮುಖ ಕಾಯಿಲೆಗಳಿಗೆ ಉತ್ತಮ ಚಿಕಿತ್ಸಾ ವ್ಯವಸ್ಥೆ ಹಾಗೂ ತಂಡವನ್ನು ಹೊಂದಿರುವ ಪ್ರಮುಖ ಖಾಸಗಿ ತಂಡವನ್ನು ಹೊಂದಿರುವ ಪ್ರಮುಖ ಖಾಸಗಿ ಆಸ್ಪತ್ರೆಗಳ ಹಾಗೂ ದಾನಿಗಳ ಸಹಯೋಗದೊಂದಿಗೆ ಇಂತಹ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಪರಿಶೀಲಿಸುವುದೇ;

ಇ) ಖಾಸಗಿ ಸಹಭಾಗಿತ್ವದಲ್ಲಿ ಆರಂಭಿಸಲಾಗುವ ಇಂತಹ ಸೌಲಭ್ಯಗಳಲ್ಲಿ ಬಡ : ಮಧ್ಯಮ ವರ್ಗದ ಜನರಿಗೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ನೀಡುವುದನ್ನು ಸರ್ಕಾರ ಪರಿಗಣಿಸುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವಾರ್ತಾ ಸಚಿವರು):

ಅ) ಬಂದಿದೆ.

ಆ)1) ಜಿಲ್ಲಾ ಆಸ್ಪತ್ರೆಗಳಾದ ಚಾಮರಾಜನಗರ ಮತ್ತು ಬೀದರ್ ಈ ಆಸ್ಪತ್ರೆಗಳಲ್ಲಿ ಹೃದಯಕ್ಕೆ ಸಂಬಂಧಿಸಿದ ಕಾಯಿಲೆಗಳಿಗೆ ನಾರಾಯಣ ಹೃದಯಾಲಯ, ಬೆಂಗಳೂರು ಇವರ ಸಹಯೋಗದೊಂದಿಗೆ ಟೆಲಿ ಮೆ: ಡಿಸಿನ್ ಸೇವಾ ಸೌಲಭ್ಯವನ್ನು ಒದಗಿಸಲಾಗಿದೆ. ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಈ ಸೇವೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

2) ಕಿಡ್ನಿ ಕಾಯಿಲೆಗೆ ಸಂಬಂಧಿಸಿದಂತೆ ಡಯಾಲಿಸಿಸ್ ಸೇವೆ ಅವಶ್ಯಕತೆ ಇರುತ್ತದೆ. ಈ ಸೌಲಭ್ಯವನ್ನು ಬೇರೆ ಖಾಸಗಿ ಆಸ್ಪತ್ರೆಗಳು ಒದಗಿಸಲು ಮುಂದೇ ಬಂದರೆ ಪರಿಶೀಲಿಸಲಾಗುವುದು. ರಾಯಚೂರಿನ OPEC ಆಸ್ಪತ್ರೆಯನ್ನು ಅಪೋಲೋ ಆಸ್ಪತ್ರೆಯ ಸಹಭಾಗಿತ್ವದಲ್ಲಿ ನಡೆಸಲಾಗುತ್ತಿದೆ.

ಇ) ಪ್ರಸ್ತುತ ನಾರಾಯಣ ಹೃದಯಾಲಯದ ಸಹಭಾಗಿತ್ವದಲ್ಲಿ ಯಾವುದೇ ಹೆಚ್ಚಿನ ಶುಲ್ಕ ಇರುವುದಿಲ್ಲ ಮತ್ತು ರಾಯಚೂರಿನ OPEC ಆಸ್ಪತ್ರೆಯಲ್ಲಿ ಸಹ ಇಂತಹ ಸೌಲಭ್ಯ ನೀಡಲು ಪರಿಶೀಲಿಸಲಾಗುತ್ತಿದೆ. ಇದೇ ರೀತಿ ಬೇರೆ ಖಾಸಗಿ ಆಸ್ಪತ್ರೆಗಳು ಸಹ ಬಡ : ಮಧ್ಯಮ ವರ್ಗದ ಜನರಿಗೆ ರಿಯಾಯಿತಿ ದರದಲ್ಲಿ ಚಿಕಿತ್ಸೆ ಸೌಲಭ್ಯ ಒದಗಿಸಲು ಮುಂದೆ ಬಂದರೆ ಪರಿಶೀಲಿಸಲಾಗುವುದು.

ಗಾಂಧಿನಗರದಲ್ಲಿರುವ ಸರ್ಕಾರಿ ಆಯುರ್ವೇದ ಆಸ್ಪತ್ರೆಯ ಅಭಿವೃದ್ಧಿ

953 (1171) ಶ್ರೀ ದಿನೇಶ್ ಗುಂಡುರಾವ್ (ಗಾಂಧಿನಗರ) : ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಾರಾಜರು, ರಾಜ್ಯದ ಮುಖ್ಯಮಂತ್ರಿಗಳು, ಸೇರಿದಂತೆ ಗಣ್ಯಾತಿಗಣ್ಯ ವ್ಯಕ್ತಿಗಳ ಚಿಕಿತ್ಸೆ ಪಡೆಯುತ್ತಿದ್ದ ಗಾಂಧಿನಗರದಲ್ಲಿರುವ ಸರ್ಕಾರಿ ಆಯುರ್ವೇದ ಆಸ್ಪತ್ರೆ ಇಂದು ಆರ್ಥಿಕ ತೊಂದರೆಯಿಂದ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸಾರ್ವಜನಿಕರಿಗೆ ಹೆಚ್ಚಿನ ಹಾಗೂ ಉತ್ತಮ ಸೌಲಭ್ಯ ಕಲ್ಪಿಸಲು ಈ ಆಸ್ಪತ್ರೆಯಲ್ಲಿನ ಇಂದಿನ ಪ್ರಮುಖ ಅಗತ್ಯತೆಗಳೇನು;

ಇ) ಈ ಆಸ್ಪತ್ರೆ ಮೊದಲಿನಂತೆ ಪ್ರಸಿದ್ಧಿಯನ್ನು ಪಡೆದು ಜನತೆಗೆ ಹೆಚ್ಚಿನ ಹಾಗೂ ಉತ್ತಮ ಸೇವೆ ಸಲ್ಲಿಸಲು ಆಸ್ಪತ್ರೆಯ ಅಭಿವೃದ್ಧಿಯ ಸಮಗ್ರ ಕಾರ್ಯ ಯೋಜನೆಯನ್ನು ಸರ್ಕಾರ ಸಿದ್ಧಪಡಿಸುವುದೆ;

ಈ) ಈ ಕಾರ್ಯ ಯೋಜನೆಯ ಅನುಷ್ಠಾನಕ್ಕಾಗಿ ಮುಂಬರುವ ಆಯವ್ಯಯದಲ್ಲಿ ವಿಶೇಷ ಅನುದಾನವನ್ನು ಒದಗಿಸಲಾಗುವುದೆ?

ಶ್ರೀಮತಿ ನಫೀಸಾ ಫಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು):

ಅ) ಇಲ್ಲ

ಆ) ಆಸ್ಪತ್ರೆಯ ಕಟ್ಟಡವು ಸುಮಾರು ಹಳೆಯದಾಗಿರುವುದರಿಂದ ಕಟ್ಟಡದ ನವೀಕರಣ, ಹೊರ ರೋಗಿಗಳ ವಿಭಾಗದ ಪ್ರತ್ಯೇಕ ಕಟ್ಟಡ ನಿರ್ಮಾಣದ ಅವಶ್ಯಕತೆ ಇದೆ.